ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:**648/2025**

ಪಿ.ಡಬ್ಲ್ಯೂ-**3**
ಸಿ.ಡಬ್ಲ್ಯೂ-**6**

ಸಾಕ್ಷಿಗೆ ದಿನಾಂಕ **27-07-2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಗೋವಿಂದರಾಜು

ತಂದೆಯ ಹೆಸರು : ಯಲ್ಲಪ್ಪ

ವಯಸ್ಸು : 26 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ರಂಗವ್ವನಹಳ್ಳಿ ಬೋವಿಹಟ್ಟಿ ಗ್ರಾಮ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ನ್ಯಾಯಾಲಯದ ಮುಂದೆ ಹಾಜರಿರುವ 1 ರಿಂದ 4 ನೇ ಆರೋಪಿತರು ನನ್ನ ಸೋದರ ಸಂಬಂಧಿಕರಾಗಬೇಕು. ಚಾ.ಸಾ-1 ನನ್ನ ತಾಯಿ, ಚಾಸಾ 4 ನನ್ನ ತಮ್ಮ. ಚಾಸಾ 5 ನನ್ನ ಹೆಂಡತಿ.

ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಜಗಳ ನಡೆದಿಲ್ಲ. ಆರೋಪಿತರು ನಮ್ಮ ಮೇಲೆ ಯಾವುದೇ ಹಲ್ಲೇ ಮಾಡಿರುವುದಿಲ್ಲ. ಅವಾಚ್ಯ ಶಬ್ದಗಳಿಂದ ನಿಂದಿಸಿಲ್ಲ ಮತ್ತು ಪ್ರಾಣ ಬೆದರಿಕೆ ಹಾಕಿಲ್ಲ. ನಾವು ಯಾವುದೇ ಚಿಕಿತ್ಸೆ ಪಡೆದಿರುವುದಿಲ್ಲ. ಘಟನೆಗೆ ಸಂಬಂಧಿಸಿದಂತೆ ಚಾಸಾ1 ರವರು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ನಾನೂ ಸಹ ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಕಲ್ಲನ್ನು ನೋಡಿ ಗುರುತಿಸಿರುವುದಿಲ್ಲ.

**(**ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು**)**

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿ: 27.03.2025 ರಂದು ಮಧ್ಯಾಹ್ನ 3.30 ಗಂಟೆ ಸಮಯದಲ್ಲಿ ಚಾಸಾ1 ಮತ್ತು ಚಾಸಾ-5 ರವರು ನಮ್ಮ ಹೊಲದಲ್ಲಿರುವ ಮನೆಯಲ್ಲಿರುವಾಗ 1 ರಿಂದ 4 ನೇ ಆರೋಪಿಗಳು ನಮ್ಮ ಹತ್ತಿರ ಬಂದು ಜಮೀನಿನ ವಿಚಾರವಾಗಿ ನಮಗೆ

ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ . 4 ನೇ ಆರೋಪಿ ಅಲ್ಲೇ ಬಿದ್ದಿದ್ದ ಕಲ್ಲನ್ನು ತೆಗೆದುಕೊಂಡು ಚಾಸಾ-1 ರವರ ತಲೆಗೆ ಹೊಡೆದು ರಕ್ತಗಾಯಪಡಿಸಿದರು ಎಂದರೆ ಸರಿಯಲ್ಲ. ಕೈ ಯಿಂದ ಚಾಸಾ1 ರವರ ಎದೆಗೆ ಎರಡು ಬಾರಿ ಹೊಡೆದು ನೋವುಂಟು ಮಾಡಿದರು ಎಂದರೆ ಸರಿಯಲ್ಲ . ಚಾಸಾ 5 ರವರು ಜೋರಾಗಿ ಕೂಗಿಕೊಂಡು ಗಲಾಟೆ ಬಿಡಿಸಿದರು ಎಂದರೆ ಸರಿಯಲ್ಲ . ಆಗ ಅಲ್ಲಿಗೆ ನಾನು ಹೋಗಿ ಹಲ್ಲೆ ಮಾಡಿದ ಬಗ್ಗೆ ಪ್ರಶ್ನಿಸಿದಾಗ 1 ಮತ್ತು 2 ನೇ ಆರೋಪಿ ನನಗೆ ಕೈಯಿಂದ ಹೊಡೆದು ನೋವುಂಟುಮಾಡಿದರು ಎಂದರೆ ಸರಿಯಲ್ಲ . ಆರೋಪಿಗಳು ನಮ್ಮನ್ನು ಉದ್ದೇಶಿಸಿ ನಿಮ್ಮನ್ನು ಬಿಡುವುದಿಲ್ಲವೆಂದು ಪ್ರಾಣ ಬೆದರಿಕೆ ಹಾಕಿ ಹೋದರು ಎಂದರೆ ಸರಿಯಲ್ಲ . ನಂತರ ನಾನು ಮತ್ತು ಚಾಸಾ1 ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಗೆ ದಾಖಲಾದೆವು ಎಂದರೆ ಸರಿಯಲ್ಲ. ಈ ಕುರಿತು ಅದೇದಿನ ಪೊಲೀಸರು ಆಸ್ಪತ್ರೆಗೆ ಬಂದು ಚಾಸಾ1 ರವರ ಹೇಳಿಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ .

ಈ ಕುರಿತು ನಾನು ದಿ 28.03.2025 ರಂದು ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆರೋಪಿತರು ನಮ್ಮ ಸಂಬಂಧಿಕರು ಎಂದರೆ ಸರಿ. ಈ ಪ್ರಕರಣದಲ್ಲಿ ಆರೋಪಿತರೊಂದಿಗೆ ರಾಜೀಯಾಗಿದ್ದೇನೆಂದರೆ ಸರಿ. ರಾಜಿಯಾಗಿರುವ ಕಾರಣ ನಿಪಿ-6 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿಗಳ ಪರ ಶ್ರೀ ಆರ್ ವಿ ವಕೀಲರಿಂದ</u>

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.